## ಕರ್ನಾಟಕ ವಿಧಾನಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ ಬುಡ್ನಾ ಸಿದ್ದಿ ಇವರು ನಿಯಮ-72ರಡಿ ರಾಜ್ಯದಲ್ಲಿನ ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯರಿಗೆ ಹಾಗೂ ಸಿಬ್ಬಂದಿಗಳಿಗೆ ಆಸ್ಪತ್ರೆಯ ಸಮೀಪದಲ್ಲಿಯೆ ವಸತಿಗೃಹಗಳನ್ನು ನಿರ್ಮಿಸಿ ರಾತ್ರಿ ಸಮಯದಲ್ಲಿ ತುರ್ತು ಚಿಕಿತ್ಸೆಗೆ ಸಹಾಯವಾಗುವಂತೆ ಕ್ರಮಗೊಳ್ಳುವ ಬಗ್ಗೆ, ಸಾರ್ವಜನಿಕ ಮಹತ್ವದ ವಿಷಯದ ಬಗ್ಗೆ.

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-**

2024-25ನೇ ಸಾಲಿನವರೆಗೆ ರಾಜ್ಯದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ, ಶುಶ್ರೂಷಾಧಿಕಾರಿಗಳ ಹಾಗೂ ಸಿಬ್ಬಂದಿಗಳಿಗೆ ಒಟ್ಟಾರೆ 2286 ವಸತಿಗೃಹಗಳು ಲಭ್ಯವಿದ್ದು ವಿವರಗಳು ಈ ಕೆಳಕಂಡಂತಿವೆ.

| Sl No | Facility | Existing Quarters | | |
|---|---|---|---|---|
| | | Upto 2024-25 completed and existing | | |
| | | Doctor's | Nurse | Staff |
| 1 | PHC | 680 | 730 | 876 |
| | Total | 2286 | | |

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯರಿಗೆ ಹಾಗೂ ಸಿಬ್ಬಂದಿಗಳಿಗೆ ಆಸ್ಪತ್ರೆಯ ಸಮೀಪದಲ್ಲಿಯೇ ತುರ್ತು ಚಿಕಿತ್ಸೆಗೆ ಸಹಾಯವಾಗುವಂತೆ ವಸತಿಗೃಹಗಳನ್ನು ನಿರ್ಮಿಸಲು ವಿವಿಧ 09 ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಂದ ಒಟ್ಟು 494 ವಸತಿ ಗೃಹಗಳ ನಿರ್ಮಾಣಕ್ಕಾಗಿ ಪ್ರಸ್ತಾವನೆ ಸ್ವೀಕೃತವಾಗಿದ್ದು, ವಸತಿ ಗೃಹಗಳ ನಿರ್ಮಾಣಕ್ಕೆ ಅಗತ್ಯವಾದ ಭೂಮಿ ಮತ್ತು ಅನುದಾನದ ಲಭ್ಯತೆಗನುಗುಣವಾಗಿ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಕ್ರಮಕೈಗೊಳ್ಳಲಾಗುವುದು.

ಸಂಖ್ಯೆ: ಆಕುಕ 175 ಎಸ್‌ಎಸ್‌ಎಂ 2025

(ದಿನೇಶ್ ಗುಂಡೂರಾವ್)
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**